**All India Radio: Bangalore**
**National Bulletin In Kannada**
**25.12.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.12.2025  07.35 a.m.**

**<><><><>**

ಮುಖ್ಯಾಂಶಗಳು

1. ಇಂದು ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮ ದಿನ ; ಪ್ರಧಾನಿಯವರಿಂದ ಲಕ್ನೋದಲ್ಲಿ ರಾಷ್ಟ್ರ ಪ್ರೇರಣಾ ಸ್ಥಳ ಲೋಕಾರ್ಪಣೆ
2. ಪಶುಸಂಗೋಪನೆ, ಕೃಷಿ ಮತ್ತು ಸಹಕಾರಿ ಸಂಸ್ಥೆಗಳು ಸಂಯೋಜನೆಯಾದರೆ ಸಹಕಾರ ಸಮೃದ್ಧಿ ಸಾಧ್ಯ - ಕೇಂದ್ರ ಸಚಿವ ಅಮಿತ್ ಶಾ
3. ಶೇಕಡ ೮೦ರಷ್ಟು ಕಡಿಮೆಯಾದ ಮಲೇರಿಯಾ ಪ್ರಕರಣಗಳ ಸಂಖ್ಯೆ ; ತಗ್ಗುತ್ತಿರುವ ಮರಣ ಪ್ರಮಾಣ
4. ಇಂದು ಕ್ರಿಸ್‌ಮಸ್ ; ಜಗತ್ತಿನಾದ್ಯಂತ ಸಂಭ್ರಮದ ಆಚರಣೆ
5. ಹಾಕಿ ತಂಡದ ಉಪನಾಯಕ ಹಾರ್ದಿಕ್ ಸಿಂಗ್ ಸೇರಿ ಹಲವರಿಗೆ ಖೇಲ್ ರತ್ನ ಪ್ರಶಸ್ತಿಗೆ ಶಿಫಾರಸ್ಸು

<><><><>

ಮಾಜಿ ಪ್ರಧಾನಿ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮ ದಿನಾಚರಣೆಯ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಲಕ್ನೋಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೨:೩೦ ಕ್ಕೆ ಪ್ರಧಾನಿ ಅವರು ರಾಷ್ಟ್ರ ಪ್ರೇರಣಾ ಸ್ಥಳವನ್ನು ಉದ್ಘಾಟಿಸಿ, ಈ ಸಂದರ್ಭದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸ್ವಾತಂತ್ರ ಭಾರತದ ದಿಗ್ಗಜರ ಪರಂಪರೆಯನ್ನು ಗೌರವಿಸುವ ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಿಂದ ಪ್ರೇರಿತವಾಗಿರುವ ಈ ರಾಷ್ಟ್ರ ಪ್ರೇರಣಾ ಸ್ಥಳ ಭಾರತದ ಅತ್ಯಂತ ಪ್ರಬುದ್ಧ ರಾಜಕಾರಣಿಗಳಲ್ಲಿ ಒಬ್ಬರ ಜೀವನ, ಆದರ್ಶಗಳು ಮತ್ತು ಶಾಶ್ವತ ಪರಂಪರೆಗೆ ಗೌರವ ಸಲ್ಲಿಸಲಿದೆ. ಅವರ ನಾಯಕತ್ವವು ದೇಶದ ಪ್ರಜಾಪ್ರಭುತ್ವ, ರಾಜಕೀಯ ಮತ್ತು ಅಭಿವೃದ್ಧಿ ಪ್ರಯಾಣದ ಮೇಲೆ ಆಳವಾದ ಪ್ರಭಾವ ಬೀರಿದೆ. "ರಾಷ್ಟ್ರ ಪ್ರೇರಣಾ ಸ್ಥಳವನ್ನು ರಾಷ್ಟ್ರೀಯ ಮಹತ್ವವನ್ನು ಹೊಂದಿರುವ ಒಂದು ಹೆಗ್ಗುರುತು ರಾಷ್ಟ್ರೀಯ ಸ್ಮಾರಕ ಮತ್ತು ಸ್ಫೂರ್ತಿದಾಯಕ ಸಂಕೀರ್ಣವಾಗಿ ಅಭಿವೃದ್ಧಿಪಡಿಸಲಾಗಿದೆ. ಅಂದಾಜು ೨೩೦ ಕೋಟಿ ರೂಪಾಯಿ ವೆಚ್ಚದಲ್ಲಿ ಇದನ್ನು ನಿರ್ಮಿಸಲಾಗಿದ್ದು, ೬೫ ಎಕರೆ ವಿಸ್ತೀರ್ಣದಲ್ಲಿ ಹರಡಿಕೊಂಡಿದೆ. ಈ ಸಂಕೀರ್ಣವನ್ನು ನಾಯಕತ್ವ ಮೌಲ್ಯಗಳು, ರಾಷ್ಟ್ರೀಯ ಸೇವೆ, ಸಾಂಸ್ಕೃತಿಕ ಪ್ರಜ್ಞೆ ಮತ್ತು ಸಾರ್ವಜನಿಕ ಸ್ಫೂರ್ತಿಯನ್ನು ಬೆಳೆಸಲು ಮೀಸಲಾಗಿರುವ ಶಾಶ್ವತ ರಾಷ್ಟ್ರೀಯ ಆಸ್ತಿಯಾಗಿ ಕಲ್ಪಿಸಲಾಗಿದೆ. ಈ ಸಂಕೀರ್ಣದಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ, ಪಂಡಿತ್ ದೀನದಯಾಳ್ ಉಪಾಧ್ಯಾಯ ಮತ್ತು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ೬೫ ಅಡಿ ಎತ್ತರದ ಕಂಚಿನ ಪ್ರತಿಮೆಗಳಿವೆ. ಇದು ಭಾರತದ ರಾಜಕೀಯ ಚಿಂತನೆ, ರಾಷ್ಟ್ರ ನಿರ್ಮಾಣ ಮತ್ತು ಸಾರ್ವಜನಿಕ ಜೀವನಕ್ಕೆ ಅವರ ಪ್ರಮುಖ ಕೊಡುಗೆಗಳನ್ನು ಸಂಕೇತಿಸುತ್ತದೆ. ಇಲ್ಲಿ ಕಮಲದ ಆಕಾರದ ರಚನೆಯ ರೂಪದಲ್ಲಿ ವಿನ್ಯಾಸಗೊಳಿಸಲಾದ ಅತ್ಯಾಧುನಿಕ ವಸ್ತುಸಂಗ್ರಹಾಲಯವನ್ನು ಕೂಡ ಇದೆ. ಇದು ಸುಮಾರು ೯೮ ಸಾವಿರ ಚದರ ಅಡಿ ವಿಶಾಲವಾದ ಪ್ರದೇಶದಲ್ಲಿ ತಲೆ ಎತ್ತಿದೆ.

<><><><>

ಪಶುಸಂಗೋಪನೆ, ಕೃಷಿ ಮತ್ತು ಸಹಕಾರಿ ಸಂಸ್ಥೆಗಳು ಸಂಯೋಜನೆಯಾದರೆ ಸಹಕಾರದ ಮೂಲಕ ಸಮೃದ್ಧಿಯನ್ನು ಸಾಧಿಸಬಹುದಾಗಿದೆ ಎಂದು ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಹೇಳಿದ್ದಾರೆ. ಹರಿಯಾಣದ ಪಂಚಕುಲದಲ್ಲಿಂದು ಕೃಷಿಕ ಭಾರತಿ ಸಹಕಾರ ಸಂಸ್ಥೆ ಆಯೋಜಿಸಿದ್ದ ರಾಷ್ಟ್ರೀಯ ಸಹಕಾರಿ ಸಮಾವೇಶದಲ್ಲಿ ಮಾತನಾಡಿದ ಅವರು, ರೈತರು ಸಹಕಾರಿ ಡೈರಿಗಳ ಮೂಲಕ ಹಾಲು ಮಾರಿದರೆ ಹೆಚ್ಚಿನ ಆದಾಯ ಗಳಿಸಬಹುದಾಗಿದೆ ಎಂದರು. ದೇಶದ ಆಹಾರ ಭದ್ರತೆ ಮತ್ತು ಹಾಲು ಉತ್ಪಾದನೆಯಲ್ಲಿ ಹರಿಯಾಣ ಉತ್ತಮ ಕೊಡುಗೆ ನೀಡಿದ್ದು, ಹರಿಯಾಣದ ರೈತರು, ಸೈನಿಕರು ಮತ್ತು ಕ್ರೀಡಾಪಟುಗಳು ದೇಶ ಹೆಮ್ಮೆ ಪಡುವಂತೆ ಮಾಡಿದ್ದಾರೆ ಎಂದು ಹೇಳಿದರು.

<><><>

ದೇಶದಲ್ಲಿ ಮಲೇರಿಯಾ ಪ್ರಕರಣಗಳ ಸಂಖ್ಯೆ ಶೇಕಡ ೮೦ ಕ್ಕಿಂತಲೂ ಹೆಚ್ಚು ಮತ್ತು ಮರಣ ಪ್ರಮಾಣ ಶೇಕಡ ೭೮ ರಷ್ಟು ಕಡಿಮೆಯಾಗುತ್ತಿವೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ೨೦ ಸಾವಿರಕ್ಕೂ ಹೆಚ್ಚು ಆಯುಷ್ಮಾನ್ ಆರೋಗ್ಯ ಮಂದಿರಗಳು, ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ ಪ್ರಮಾಣೀಕರಣವನ್ನು ಪಡೆದಿವೆ. ಕ್ಷಯರೋಗ ಪ್ರಕರಣಗಳಲ್ಲಿ ಶೇಕಡ ೨೧ ರಷ್ಟು ಇಳಿಕೆ ಸಾಧಿಸಿದೆ. ತಾಯಂದಿರು ಮತ್ತು ಮಕ್ಕಳ ಆರೋಗ್ಯ ಫಲಿತಾಂಶಗಳಲ್ಲಿ ಗಮನಾರ್ಹ ಪರಿವರ್ತನೆಯಾಗುತ್ತಿವೆ. ಈ ವರ್ಷ ತಾಯಂದಿರ ಮರಣ ಅನುಪಾತ ಶೇಕಡ ೮೮ ಕ್ಕೆ ಇಳಿದಿದೆ. ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯು ಜನ ಸಾಮಾನ್ಯರ ಆರೋಗ್ಯ ವೆಚ್ಚವನ್ನು ಶೇಕಡ ೬೯ ರಿಂದ ಶೇಕಡಾ ೩೯ ಕ್ಕೆ ಗಣನೀಯವಾಗಿ ಕಡಿಮೆ ಮಾಡಿದೆ, ಲಕ್ಷಾಂತರ ಕುಟುಂಬಗಳಿಗೆ ಆರ್ಥಿಕ ರಕ್ಷಣೆಯನ್ನು ಬಲಪಡಿಸಿದೆ ಎಂದು ಜೆ.ಪಿ ನಡ್ಡಾ ಹೇಳಿದರು.

<><><>

ಇಂದು ಕ್ರಿಸ್‌ಮಸ್ ಹಬ್ಬವನ್ನು ಜಗತ್ತಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಎಲ್ಲೆಡೆ ಕ್ರಿಸ್‌ಮಸ್ ಟ್ರೀ ಅಳವಡಿಸಿ ಏಸುಕ್ರಿಸ್ತನ ಸಂಕೇತಗಳನ್ನು ಪ್ರತಿಬಿಂಬಿಸುವ ಪ್ರತಿರೂಪಗಳನ್ನು ನಿರ್ಮಿಸಿ ಕ್ರಿಸ್ತನ ಆರಾಧನೆ ಮಾಡಲಾಗುತ್ತಿದೆ. ಪರಸ್ಪರ ಉಡುಗೊರೆಗಳನ್ನು ವಿನಿಮಯ ಮಾಡಿಕೊಂಡು ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತದೆ. ಕಳೆದ ಮೇನಲ್ಲಿ ಪೋಪ್ ಲಿಯೋ ಅವರು, ಆಯ್ಕೆಯಾಗಿದ್ದು, ಕ್ರಿಸ್‌ಮಸ್‌ಅನ್ನು ಮತ್ತಷ್ಟು ಸಂಭ್ರಮಿಸುವಂತೆ ಮಾಡಿದೆ.

<><><>

ಕರ್ನಾಟಕದಿಂದ ತಿರುಪತಿಗೆ ಆಗಮಿಸುವ ಭಕ್ತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಮುಂದಿನ ವರ್ಷದ ಮಾರ್ಚ್ ವೇಳೆಗೆ ಪೂರ್ಣಗೊಳಿಸಬೇಕೆಂದು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಿನ್ನೆ ತಿರುಪತಿಗೆ ಭೇಟಿ ನೀಡಿದ್ದ ಅವರು, ತಿರುಮಲದಲ್ಲಿ ಸರ್ಕಾರ ನಿರ್ಮಿಸುತ್ತಿರುವ ಮೂರು ಅತಿಥಿಗೃಹಗಳು ಹಾಗೂ ಛತ್ರದ ಕಾಮಗಾರಿಯನ್ನು ಪರಿಶೀಲನೆ ನಡೆಸಿದರು. ಕೂಡಲೇ ಸಣ್ಣ ಲೋಪ ದೋಷಗಳನ್ನು ಸರಿಪಡಿಸಿ ಯಾತ್ರಿಗಳ ಬಳಕೆಗೆ ಸಿದ್ಧಪಡಿಸಬೇಕೆಂದು ಆದೇಶಿಸಿದರು.

<><><>

ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ಮತ್ತು ಭಾರತೀಯ ಪುರುಷರ ಹಾಕಿ ತಂಡದ ಉಪನಾಯಕ ಹಾರ್ದಿಕ್ ಸಿಂಗ್ ಅವರನ್ನು ಪ್ರತಿಷ್ಠಿತ ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗೆ ನಾಮನಿರ್ದೇಶನ ಮಾಡಲಾಗಿದೆ. ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ಉಪಾಧ್ಯಕ್ಷ ಗಗನ್ ನಾರಂಗ್, ಮಾಜಿ ಹಾಕಿ ಆಟಗಾರ ಎಂ.ಎಂ ಸೋಮಯ ಮತ್ತು ಮಾಜಿ ಬ್ಯಾಡ್ಮಿಂಟನ್ ಆಟಗಾರ್ತಿ ಅಪರ್ಣಾ ಪೋಪಟ್ ಅವರನ್ನೊಳಗೊಂಡ ಆಯ್ಕೆ ಸಮಿತಿಯು ೨೦೨೫ರ ರಾಷ್ಟ್ರೀಯ ಕ್ರೀಡಾ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು ಅಂತಿಮಗೊಳಿಸಿದೆ. ಯೋಗಾಸನ ಕ್ರೀಡಾಪಟು ಆರತಿ ಪಾಲ್ ಸೇರಿದಂತೆ ೨೪ ಕ್ರೀಡಾಪಟುಗಳನ್ನು ಅರ್ಜುನ ಪ್ರಶಸ್ತಿಗೆ ಆಯ್ಕೆ ಸಮಿತಿಯು ಶಿಫಾರಸು ಮಾಡಿದೆ. ರೈಫಲ್ ಶೂಟರ್ ಮೆಹುಲಿ ಘೋಷ್, ಜಿಮ್ನಾಸ್ಟ್ ಪ್ರಣತಿ ನಾಯಕ್ ಮತ್ತು ಭಾರತದ ಅಗ್ರ ಶ್ರೇಯಾಂಕಿತ ಮಹಿಳಾ ಬ್ಯಾಡ್ಮಿಂಟನ್ ಜೋಡಿ ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಕೂಡ ಈ ಪಟ್ಟಿಯಲ್ಲಿ ಸೇರಿದ್ದಾರೆ. ಖೇಲ್ ರತ್ನವು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯವು ವಾರ್ಷಿಕವಾಗಿ ನೀಡುವ ಭಾರತದ ಅತ್ಯುನ್ನತ ಕ್ರೀಡಾ ಗೌರವವಾಗಿದೆ. ನಾಮನಿರ್ದೇಶಿತ ಕ್ರೀಡಾಪಟುಗಳು ರಾಷ್ಟ್ರಪತಿ ಅವರಿಂದ ಪ್ರಶಸ್ತಿ ಸ್ವೀಕರಿಸಲಿದ್ದಾರೆ.

<><><>

ಅಟಲ್ ಸ್ಮೃತಿ ನ್ಯಾಸ್ ಸೊಸೈಟಿಯ ಅಧ್ಯಕ್ಷರಾಗಿ ಮಾಜಿ ಉಪರಾಷ್ಟ್ರಪತಿ ಎಂ.ವೆಂಕಯ್ಯ ನಾಯ್ಡು ಅವರನ್ನು ಆಯ್ಕೆ ಮಾಡಲಾಗಿದೆ. ನವದೆಹಲಿಯಲ್ಲಿ ನಡೆದ ಸಭೆಯಲ್ಲಿ ಅಟಲ್ ಸ್ಮೃತಿ ನ್ಯಾಸ್ ಸೊಸೈಟಿಯ ಸ್ಥಾಪಕ ಸದಸ್ಯರಾದ ರಾಮ್ ಬಹದ್ದೂರ್ ರಾಯ್ ಅವರು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಇತರ ಸದಸ್ಯರೊಂದಿಗೆ ಸಮಾಲೋಚಿಸಿ ಈ ಹುದ್ದೆಗೆ ವೆಂಕಯ್ಯ ನಾಯ್ಡು ಅವರ ಹೆಸರನ್ನು ಪ್ರಸ್ತಾಪಿಸಿದರು. ಇತ್ತೀಚೆಗೆ ನಿಧನರಾದ ಅಟಲ್ ಸ್ಮೃತಿ ನ್ಯಾಸ್ ಸೊಸೈಟಿ ಅಧ್ಯಕ್ಷರಾಗಿದ್ದ  ವಿಜಯ್ ಕುಮಾರ್ ಮಲ್ಹೋತ್ರಾ ಅವರ ಸ್ಥಾನವವನ್ನು ವೆಂಕಯ್ಯ ನಾಯ್ಡು ತುಂಬಲಿದ್ದಾರೆ.

<><><>

ದೇಶದ ತರಬೇತಿ ವ್ಯವಸ್ಥೆಗಳು ನೈಜ ಜಗತ್ತಿನ ಬೇಡಿಕೆಗೆ ಸ್ಪಂದಿಸುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ, ಕೈಗಾರಿಕೆ, ಶೈಕ್ಷಣಿಕ ಮತ್ತು ತರಬೇತಿ ಸಂಸ್ಥೆಗಳ ನಡುವೆ ಕೃತಕ ಬುದ್ಧಿಮತ್ತೆ ಸಾಮರ್ಥ್ಯಗಳನ್ನು ನಿರ್ಮಿಸುವ ಅಗತ್ಯವಿದೆ ಎಂದು ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವ ಜಯಂತ್ ಚೌಧರಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಕೃತಕ ಬುದ್ಧಿ ಮತ್ತೆಯಲ್ಲಿ ಕೌಶಲ್ಯ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ಶಿಕ್ಷಣ, ವೃತ್ತಿಪರ ತರಬೇತಿಯಲ್ಲಿ ಕೃತಕ ಬದ್ದಿಮತ್ತೆ ಕೌಶಲ್ಯಗಳನ್ನು ಅಳವಡಿಸುವ ಮೂಲಕ, ಸರ್ಕಾರವು ಕೃತಕಬುದ್ಧಿಮತ್ತೆಯನ್ನು ಸಕ್ರಿಯಗೊಳಿಸಸುತ್ತಿದೆ. ತನ್ಮೂಲಕ ಜಾಗತಿಕ ಆರ್ಥಿಕತೆಯಲ್ಲಿ ವಿಕಸಿತ ಭಾರತಕ್ಕೆ ಅಡಿಪಾಯ ಹಾಕುತ್ತಿದೆ ಎಂದು ಹೇಳಿದರು.

<><><>

ಕೇಂದ್ರ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಅಧೀನದಲ್ಲಿ  ಮೈಸೂರಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೇಂದ್ರೀಯ ಸಂಪರ್ಕ ಬ್ಯೂರೋ ಕಚೇರಿಯನ್ನು ಸ್ಥಗಿತಗೊಳಿಸಬಾರದು ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ಈ ಬಗ್ಗೆ ಕೇಂದ್ರದ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಪತ್ರ ಬರೆದಿರುವ ಕುಮಾರಸ್ವಾಮಿ ಅವರು,

ಮೈಸೂರಿನಲ್ಲಿ ಕೇಂದ್ರೀಯ ಸಂಪರ್ಕ ಬ್ಯೂರೋವನ್ನು ಮತ್ತಷ್ಟು ಉನ್ನತೀಕರಿಸಿ ಯಥಾಸ್ಥಿತಿಯಲ್ಲಿ ಮುಂದುವರಿಸುವುದು ಅಗತ್ಯವಾಗಿದೆ. ಮೈಸೂರು ನಗರ ಐತಿಹಾಸಿಕ ಪ್ರಾಮುಖ್ಯತೆ ಹೊಂದಿದ್ದು, ಇಲ್ಲಿಗೆ ದೇಶ ವಿದೇಶಗಳಿಂದ ಅಸಂಖ್ಯಾತ ಪ್ರವಾಸಿಗರು ಭೇಟಿ ನೀಡುತ್ತಾರೆ.

<><><><>

ವಿಕಸಿತ ಭಾರತ ಜಿ ರಾಮ್ ಜಿ-೨೦೨೫ ಕಾಯ್ದೆ ಸಂಬಂಧ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬರೆದಿರುವ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ತಮ್ಮ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಈ ಸಂಬಂಧ ಪ್ರಧಾನಿ, ಲೇಖನದಲ್ಲಿ ವಿಕಸಿತ ಭಾರತ್-ಜಿ ರಾಮ್ ಜಿ ಕಾಯ್ದೆ ಸೃಷ್ಟಿಸಲಿರುವ ಆದಾಯ ಬೆಂಬಲ, ಆಸ್ತಿಗಳ ಸೃಷ್ಟಿ, ಕೃಷಿ ಸ್ಥಿರತೆ ಹಾಗೂ ದೀರ್ಘಕಾಲಿಕ ಗ್ರಾಮೀಣ ಉತ್ಪಾದಕತೆಯ ಮಹತ್ವವನ್ನು ಪ್ರಮುಖವಾಗಿ ಸಚಿವ ಚೌಹಾಣ್ ವಿವರಿಸಿದ್ದಾರೆ ಎಂದು ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>